ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳು, ನೃಪತುಂಗ ರಸ್ತೆ, ಬೆಂಗಳೂರು-560001**

ಸಂಖ್ಯೆ:ಸಿ7[2]ಪ್ರಾಶಿಅ.ಹೊ.ಶಾ.ನೋಂ.01/2021-22 ದಿನಾಂಕ:23ನೇ ಡಿಸೆಂಬರ್ 2021

*: ಸುತ್ತೋಲೆ :*

ವಿಷಯ: 2021-22ನೇ ಸಾಲಿನಲ್ಲಿ ಹೊಸದಾಗಿ ಶಾಶ್ವತ ಅನುದಾನ ರಹಿತ ಶಾಲೆಗಳನ್ನು ಪ್ರಾರಂಭಿಸಲು ನೋಂದಾಯಿಸಲು ಸಲ್ಲಿಸಿದ ಅರ್ಜಿಗಳಲ್ಲಿ ತಿರಸ್ಕೃತಗೊಂಡ ಅರ್ಜಿಗಳಿಗೆ ಪುನರ್ ಸಲ್ಲಿಸಲು ಕಾಲಾವಕಾಶ ವಿಸ್ತರಿಸಿರುವ ಬಗ್ಗೆ.

ಉಲ್ಲೇಖ: 1) ಈ ಕಛೇರಿ ಸುತ್ತೋಲೆ ಸಮಸಂಖ್ಯೆ ದಿನಾಂಕ:29-06-2021.
2) ಸರ್ಕಾರದ ಆದೇಶ ಸಂಖ್ಯೆ:ಇಪಿ.374.ಪಿಜಿಸಿ.2021, ದಿನಾಂಕ:03-12-2021
3) ಈ ಕಛೇರಿ ಸುತ್ತೋಲೆ ಸಮಸಂಖ್ಯೆ ದಿನಾಂಕ:3-12-2021
4) ನಿರ್ದೇಶಕರು (ಪ್ರೌಢ ಶಿಕ್ಷಣ) ಇವರ ಟಿಪ್ಪಣಿ ದಿನಾಂಕ:23-12-2021

*****

2021-22ನೇ ಶೈಕ್ಷಣಿಕ ಸಾಲಿನಲ್ಲಿ ಖಾಸಗಿ ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಉದ್ದೇಶಿಸಿರುವ ಸಂಸ್ಥೆಗಳು ಆನ್‌ಲೈನ್ ಮುಖಾಂತರ **ದಿ:30-08-2021ರವರೆಗೆ ಇಲಾಖಾ ವೆಬ್‌ಸೈಟ್‌ನಲ್ಲಿ** [www.schooleducation.kar.nic.in] ಅರ್ಜಿಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಈ ಅವಧಿಯಲ್ಲಿ ಸಲ್ಲಿಸಿದ್ದ ಅರ್ಜಿಗಳನ್ನು ಸಂಬಂಧಿಸಿದ ಪ್ರಾಧಿಕಾರವು ಪರಿಶೀಲಿಸಿ ಅವುಗಳನ್ನು ಇತ್ಯರ್ಥಪಡಿಸಿ ಆದೇಶ ನೀಡಿರುತ್ತವೆ.

ಆಡಳಿತ ಮಂಡಳಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ಕಟ್ಟಡ ಸುರಕ್ಷತೆ, ಅಗ್ನಿ ಸುರಕ್ಷತೆ ಪ್ರಮಾಣ ಪತ್ರಗಳನ್ನು ಹಾಗೂ ಇತರೆ ದಾಖಲೆಗಳನ್ನು ಪೂರ್ಣ ಪ್ರಮಾಣದಲ್ಲಿ ಸಲ್ಲಿಸಲು ಸಾಧ್ಯವಾಗದೆ ಇದ್ದುದರಿಂದ ಅಂತಹ ಅರ್ಜಿಗಳನ್ನು ಪ್ರಾಧಿಕಾರವು ತಿರಸ್ಕರಿಸಿ ಆದೇಶ ಹೊರಡಿಸಿರುತ್ತದೆ.

ಈ ಬಗ್ಗೆ ಸರ್ಕಾರವು ಪರಿಶೀಲಿಸಿ ಉಲ್ಲೇಖ(2)ರಲ್ಲಿ ನೀಡಿರುವ ಆದೇಶದಂತೆ 2021-22ನೇ ಸಾಲಿನಲ್ಲಿ ದಾಖಲಾತಿಗಳನ್ನು ಪೂರ್ಣ ಪ್ರಮಾಣದಲ್ಲಿ ಸಲ್ಲಿಸದೇ ತಿರಸ್ಕೃತವಾಗಿರುವ ಅರ್ಜಿಗಳಿಗೆ 20 ದಿನಗಳ ಕಾಲಾವಕಾಶ ನೀಡಿ ಪ್ರಮಾಣ ಪತ್ರಗಳನ್ನು ಅಪ್‌ಲೋಡ್ ಮಾಡಲು ಅವಕಾಶ ನೀಡಿರುತ್ತದೆ. ಅದರಂತೆ ಉಲ್ಲೇಖ (3)ರಲ್ಲಿ ಮಾಹಿತಿಗಳನ್ನು ಅಫ್ ಲೋಡ್ ಮಾಡಲು ದಿನಾಂಕ:23-12-2021 ರವರೆಗೆ ಎಸ್.ಎ.ಟಿ.ಎಸ್ ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿತ್ತು.

ಉಲ್ಲೇಖ(4)ರ ಟಿಪ್ಪಣಿಯಂತೆ ಹಾಗೂ ದಿನಾಂಕ:23-12-2021ರಂದು ನಡೆದ ಸಭೆಯಲ್ಲಿ ಚರ್ಚಿಸಿದಂತೆ 2021-22ನೇ ಸಾಲಿನಲ್ಲಿ ತಿರಸ್ಕರಿಸಿದ ಅರ್ಜಿಗಳಲ್ಲಿ ಮಾಹಿತಿಗಳನ್ನು/ದಾಖಲೆಗಳನ್ನು ಎಸ್.ಎ.ಟಿ.ಎಸ್ ತಂತ್ರಾಂಶದಲ್ಲಿ ಅಫ್ ಲೋಡ್ ಮಾಡಲು ತಂತ್ರಾಂಶವನ್ನು ಬಿಡುಗಡೆ ಮಾಡಲು ವಿಳಂಬವಾದ ಹಿನ್ನೆಲೆಯಲ್ಲಿ ಹಾಗೂ ಆಡಳಿತಾತ್ಮಕ ಕಾರಣಗಳಿಂದಾಗಿ ಮಾಹಿತಿಗಳನ್ನು/ದಾಖಲೆಗಳನ್ನು ಅಫ್ ಲೋಡ್ ಮಾಡಲು ಕಾಲವಕಾಶ ಕೊರತೆಯಾಗಿರುವುದನ್ನು ಪರಿಗಣಿಸಿ ದಿನಾಂಕ:07-01-2022ರವರೆಗೆ ತಂತ್ರಾಂಶದಲ್ಲಿ ಅಗತ್ಯ ದಾಖಲೆಗಳನ್ನು/ಮಾಹಿತಿಗಳನ್ನು ದಾಖಲಿಸಲು/ಅಫ್ ಲೋಡ್ ಮಾಡಲು ಅಂತಿಮವಾಗಿ ಅವಕಾಶ ಕಲ್ಪಿಸಿ ವಿಸ್ತರಿಸಿದೆ. ಈ ಅವಧಿಯಲ್ಲಿ 2021-22ನೇ ಸಾಲಿನಲ್ಲಿ ತಿರಸ್ಕೃತಗೊಂಡಿರುವ ಅರ್ಜಿಗಳನ್ನು ಪುನ: ಆನ್‌ಲೈನ್ ತಂತ್ರಾಂಶದಲ್ಲಿ ಅಫ್‌ಲೋಡ್ ಮಾಡಲು ಅವಕಾಶ ಮಾಡಿಕೊಡಲಾಗಿದೆ.

## : ಅರ್ಜಿ ಸಲ್ಲಿಸಲು ಪರಿಷ್ಕರಿಸಿದ ವೇಳಾಪಟ್ಟಿ :

| ಕ್ರ. ಸಂ | ವಿಷಯ | ಪರಿಷ್ಕರಿಸಿದ ಕೊನೆಯ ದಿನಾಂಕ |
|---|---|---|
| 1. | 2021-22ನೇ ಸಾಲಿನಲ್ಲಿ ತಿರಸ್ಕೃತ ಅರ್ಜಿಗಳನ್ನು ಮರು ಸಲ್ಲಿಸಲು ತಂತ್ರಾಂಶವನ್ನು ಬಿಡುಗಡೆ ಮಾಡುವ ದಿನಾಂಕ | 03-12-2021 |
| 2 | 2021-22ನೇ ಸಾಲಿನಲ್ಲಿ ತಿರಸ್ಕೃತಗೊಂಡ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಪುನಃ ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ದಿನಾಂಕ | 04-12-2021 ರಿಂದ 07-01-2022 |
| 3. | ಎಸ್.ಎ.ಟಿ.ಎಸ್ ತಂತ್ರಾಂಶದಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ಗೆ ಮಾಹಿತಿಗಳನ್ನು ಅಪ್‌ಲೋಡ್ ಮಾಡಲು ನಿಗಧಿಪಡಿಸಿದ ದಿನಾಂಕ | 06-12-2021 ರಿಂದ 07-01-2022 |
| 4. | ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರಿಗೆ ಅರ್ಜಿಯನ್ನು ಪರಿಶೀಲಿಸಿ ಆನ್‌ಲೈನ್ ತಂತ್ರಾಂಶದಲ್ಲಿ ಸಲ್ಲಿಸಲು ಕಡೆಯ ದಿನಾಂಕ | 04-12-2021 ರಿಂದ 11-01-2022 |
| 5. | ಉಪನಿರ್ದೇಶಕರು ಸಂಬಂಧಿಸಿದ ಆಯುಕ್ತಾಲಯಕ್ಕೆ ಅರ್ಹ ಅರ್ಜಿಯನ್ನು ಆನ್‌ಲೈನ್ ತಂತ್ರಾಂಶದಲ್ಲಿ ಸಲ್ಲಿಸಲು ಕಡೆಯ ದಿನಾಂಕ. | 06-12-2021 ರಿಂದ 17-01-2022 |
| 6. | ಸಂಬಂಧಿಸಿದ ಆಯುಕ್ತಾಲಯಗಳಲ್ಲಿ / ಉಪನಿರ್ದೇಶಕರ ಕಛೇರಿಗಳಲ್ಲಿ ಅರ್ಜಿಯನ್ನು ಪರಿಶೀಲಿಸಿ, ಹೊಸ ಶಾಲೆಗಳ ನೋಂದಣಿ / ಉನ್ನತೀಕರಿಸುವ ಶಾಲೆಗಳ ನೋಂದಣಿ ಅರ್ಜಿಗಳನ್ನು ಆನ್‌ಲೈನ್ ತಂತ್ರಾಂಶದಲ್ಲಿ ಪ್ರಚಲಿತ ನಿಯಮಗಳಂತೆ ಇತ್ಯರ್ಥಪಡಿಸಿ ಮಂಜೂರಾತಿ ಅಥವಾ ತಿರಸ್ಕೃತ ಆದೇಶ ಹೊರಡಿಸಲು ಕಡೆಯ ದಿನಾಂಕ. | 07-12-2021 ರಿಂದ 27-01-2022 |

***ಸೂಚನೆ:***

- ಎಸ್.ಎ.ಟಿ.ಎಸ್ ವಿಭಾಗವು ತಕ್ಷಣ ಕ್ರಮ ಕೈಗೊಂಡು ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಿಂದ ರಾಜ್ಯ ಹಂತದವರೆಗೆ ಪರಿಶೀಲಿಸಿ ಆಗಿಂದಾಗಲೇ ಕ್ರಮವಹಿಸುವುದು ಹಾಗೂ ಪ್ರಾಧಿಕಾರವು ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ತಕ್ಷಣ ಕ್ರಮಕೈಗೊಳ್ಳಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲು ಸೂಚಿಸಿದೆ.
- ಈ ಕುರಿತು ಯಾವುದೇ ಸಮಸ್ಯೆಯಾದಲ್ಲಿ ಸಲಹೆಗಳಿಗಾಗಿ ಈ ಕೆಳಕಂಡ ಅಧಿಕಾರಿಗಳನ್ನು ಸಂಪರ್ಕಿಸಲು ಸೂಚಿಸಿದೆ.

**ಸಹಾಯಕ್ಕಾಗಿ ಸಂಪರ್ಕಿಸಬಹುದಾದ ವಿಳಾಸ / ದೂರವಾಣಿ ಸಂಖ್ಯೆ:**


ತಾಂತ್ರಿಕ ಸಲಹೆಗಾಗಿ : ಶ್ರೀಮತಿ ಶಾಂತಲ, ಹಿರಿಯ ಸಹಾಯಕ ನಿರ್ದೇಶಕರು, ದೂ.ಸಂ.9449350092
ಶ್ರೀ.ಪುರುಷೋತ್ತಮ್ ಕುಮಾರ್, ಹಿರಿಯ ಸಹಾಯಕ ನಿರ್ದೇಶಕರು ದೂ.ಸಂ.9448999468
ಶ್ರೀ ಶಿವಕುಮಾರ್, ಪ್ರೋಗ್ರಾಮರ್, ದೂ.ಸಂ.9448999449

ಇ ಮೇಲ್ ವಿಳಾಸ : sksats@gmail.com


**: : ಮಾನ್ಯ ಆಯುಕ್ತರ ಆದೇಶದ ಮೇರೆಗೆ : :**

ನಿರ್ದೇಶಕರು[ಪ್ರೌಢಶಿಕ್ಷಣ] 23/12/2021
ಸಾರ್ವಜನಿಕ ಶಿಕ್ಷಣ ಇಲಾಖೆ.

***ಇವರಿಗೆ:***

*01.* ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು[ಆಡಳಿತ] ರವರಿಗೆ

*02.* ರಾಜ್ಯದ ಎಲ್ಲಾ ತಾಲ್ಲೂಕು/ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ

ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:-

*01.* ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ ಮತ್ತು ಧಾರವಾಡ ಇವರಿಗೆ ಕಳುಹಿಸುತ್ತಾ ನಿಯಮಾನುಸಾರ ಕ್ರಮವಹಿಸಲು ತಿಳಿಸಿದೆ.

*02.* ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ, ಕರ್ನಾಟಕ, ಬೆಂಗಳೂರು ಇವರ ಮಾಹಿತಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

*03.* ನಿರ್ದೇಶಕರು, (ಕಾರ್ಯಕ್ರಮ) ಸಮಗ್ರ ಶಿಕ್ಷಣ, ಕರ್ನಾಟಕ, ಬೆಂಗಳೂರು ಇವರ ಮಾಹಿತಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

*04.* ಹಿರಿಯ ಕಾರ್ಯಕ್ರಮಾಧಿಕಾರಿಗಳು, ಎಸ್.ಎ.ಟಿ.ಎಸ್ ವಿಭಾಗ, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು. ಇವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ

*05.* ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಬೆಂಗಳೂರು ರವರಿಗೆ ಕಳುಹಿಸುತ್ತಾ ಇಲಾಖಾ ವೆಬ್‌ಸೈಟ್‌ನ ಸುತ್ತೋಲೆ ವಿಭಾಗದಲ್ಲಿ ಪ್ರಕಟಿಸಲು ಸೂಚಿಸಿದೆ.

*06.* ಪ್ರೋಗ್ರಾಮರ್, ಸಾಫ್ಟ್‌ವೇರ್ ಡೆವಲಪ್ ಮೆಂಟ್ ಸೆಂಟರ್, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು. ಇವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ

*07.* ಕಛೇರಿ ಪ್ರತಿ.